ಕಾಲೇಜುಗಳಲ್ಲಿ ಉಪನ್ಯಾಸಕರ ಹಾಗೂ ಸಿಬ್ಬಂದಿ ಕೊರತೆ

1379(1405); ಶ್ರೀ ಕುಮಾರಸ್ವಾಮಿ ಎಚ್.ಕೆ. (ಸಕಲೇಶಪುರ)

ಅ) ರಾಜ್ಯದ ಪದವಿ ಕಾಲೇಜುಗಳಲ್ಲಿ ಉಪನ್ಯಾಸಕರ ಹಾಗೂ ಬೋಧಕೇತರ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಹಾಸನ ಜಿಲ್ಲೆ ಸಕಲೇಶಪುರ ಹಾಗೂ ಹೆತ್ತೂರು ಪದವಿ ಕಾಲೇಜುಗಳಲ್ಲಿ ಶೇ. 50 ಕ್ಕೂ ಹೆಚ್ಚು ಉಪನ್ಯಾಸಕರ ಹಾಗೂ ಬೋಧಕೇತರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಸಚಿವರು)

ಅ) ಬಂದಿದೆ.

ಆ) ಖಾಲಿ ಇರುವ ಬೋಧಕರ ಹುದ್ದೆಗಳಲ್ಲಿ ಆರ್ಥಿಕ ಇಲಾಖೆಯು ಅನುಮತಿ ನೀಡಿರುವ 1298 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಸಿ.ಇ.ಟಿ. ಮುಖಾಂತರ ಭರ್ತಿ ಮಾಡಲು ಕ್ರಮ ವಹಿಸಲಾಗಿದೆ. ಖಾಲಿ ಇರುವ ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಪರಿಶೀಲನೆಯಲ್ಲಿದೆ. ಬಡ್ತಿಯಿಂದ ತುಂಬಬೇಕಾದ ಬೋಧಕೇತರ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.

ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಬೆರಳಚ್ಚುಗಾರರ ಹುದ್ದೆಗೆ ಹಾಗೂ ಗ್ರೂಪ್ ಡಿ ಹುದ್ದೆಗಳಿಗೆ ಕ್ರಮವಾಗಿ 88 ಡಾಟಾ ಎಂಟ್ರಿ ಆಪರೇಟರ್‌ಗಳನ್ನು ಹಾಗೂ 347 ಗ್ರೂಪ್ ಡಿ ಸಿಬ್ಬಂದಿಗಳನ್ನು ಹೊರಗುತ್ತಿಗೆಯ ಆಧಾರದಲ್ಲಿ ನೇಮಕ ಮಾಡಿಕೊಳ್ಳಲಾಗಿದೆ.

ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕರ ಹುದ್ದೆಗಳನ್ನು ಭರ್ತಿ ಮಾಡಲು ಪ್ರಸ್ತುತ ಆರ್ಥಿಕ ಮಿತವ್ಯಯ ಜಾರಿಯಲ್ಲಿದೆ ಹಾಗೂ ದಿನಾಂಕ:01–03–2001ರ ನಂತರ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಇನ್ನಿತರೆ ಕಾರಣಗಳಿಂದ ತೆರವಾಗುವ ಎಲ್ಲಾ ಬೋಧಕೇತರ ಹುದ್ದೆಗಳು ಶಾಶ್ವತ ಅನುದಾನರಹಿತ ಹುದ್ದೆಗಳೆಂದು ಪರಿಗಣಿಸಲ್ಪಟ್ಟಿರುತ್ತದೆ.

ಇ) ಬಂದಿದೆ.

ಈ) "ಆ" ನಲ್ಲಿ ತಿಳಿಸಿದಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

ಕಿರಿಯ ಕಾಲೇಜುಗಳಲ್ಲಿ ಸಿಬ್ಬಂದಿ ಕೊರತೆ

1380(1406); ಶ್ರೀ ಕುಮಾರಸ್ವಾಮಿ ಎಚ್.ಕೆ (ಸಕಲೇಶಪುರ)

ಅ) ರಾಜ್ಯದ ಸರ್ಕಾರಿ ಕಿರಿಯ ಕಾಲೇಜುಗಳಲ್ಲಿ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕಿನ ಕಿರಿಯ ಕಾಲೇಜುಗಳಲ್ಲಿ ಶೇ.50ಕ್ಕೂ ಹೆಚ್ಚು ಉಪನ್ಯಾಸಕರ ಹಾಗೋ ಬೋಧಕೇತರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;